# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 137 |
| ಮಾನ್ಯ ಸದಸ್ಯರ ಹೆಸರು : | ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 10.12.2018 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ಸಾಮಾಜಿಕ ಜಾತಿ ಗಣತಿಯನ್ನು ಮಾಡಲಾಗಿದೆಯೇ; (ಮಾಹಿತಿ ನೀಡುವುದು). | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ದಿನಾಂಕ: 11.04.2015 ರಿಂದ ಪ್ರಾರಂಭಿಸಿ ದಿನಾಂಕ: 30.05.2015 ರಂದು ಪೂರ್ಣಗೊಳಿಸಲಾಗಿದೆ. |
| ಆ) | ಸಾಮಾಜಿಕ ಜನಗಣತಿಗೆ ಬಳಸಿ ಕೊಂಡಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇದಕ್ಕಾಗಿ ಮಾಡಿರುವ ವೆಚ್ಚವೆಷ್ಟು; | ರಾಜ್ಯದಲ್ಲಿನ 1.27 ಲಕ್ಷ ಗಣತಿ ಬ್ಲಾಕ್‌ನಲ್ಲಿರುವ ಒಟ್ಟು 1.35 ಕುಟುಂಬಗಳ ಮಾಹಿತಿಯನ್ನು 1.60 ಲಕ್ಷ ಅಧಿಕಾರಿ/ ಸಿಬ್ಬಂದಿಗಳ ಸೇವೆಯನ್ನು ಉಪಯೋಗಿಸಿಕೊಂಡು ಸಮೀಕ್ಷೆಗೆ ಮಾಹಿತಿಯನ್ನು ಸಂಗ್ರಹಿಸಲಾಗಿದೆ.<br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಇಲ್ಲಿಯವರೆಗೂ ಒಟ್ಟು ರೂ.158.47 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. |
| ಇ) | ಸಾಮಾಜಿಕ ಜನಗಣತಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; (ಮಾಹಿತಿ ನೀಡುವುದು). | – ಇಲ್ಲ –<br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಿದ್ದಪಡಿಸುವ ಕಾರ್ಯ ಅಂತಿಮ ಹಂತದಲ್ಲಿರುತ್ತದೆ. ಆಯೋಗವು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. |
| ಈ) | ಸಾಮಾಜಿಕ ಜನಗಣತಿಯ ವರದಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು? | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿ ಸ್ವೀಕೃತವಾದ ನಂತರ ವರದಿಯನ್ನು ಪರಿಶೀಲಿಸಿ ಸಾರ್ವಜನಿಕವಾಗಿ ಬಿಡುಗಡೆ ಮಾಡುವ ಕುರಿತು ತೀರ್ಮಾನಿಸಲಾಗುವುದು. |

ಸಂಖ್ಯೆ: ಹಿಂವಕ 282 ಬಿಸಿಎ 2018

ಸಿ. ಪುಟ್ಟರಂಗಶೆಟ್ಟಿ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.